4) ಚುನಾವಣಾ ಪ್ರಸ್ತಾವಗಳು.

ಶ್ರೀ ಡಿ.ಬಿ.ಚಂದ್ರೇಗೌಡ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ,

ಅ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 265(1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಆ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 271(1)ನೇ ನಿಯಮದ ಅನುಸಾರವಾಗಿ ಈ ಸಭೆ ಅಂದಾಜುಗಳ ಸಮಿತಿಗೆ ಹದಿನೆಂಟು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಇ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 265(1)ನೇ ನಿಯಮದ ಅನುಸಾರವಾಗಿ ಈ ಸಭೆ ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಈ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 272(1)ನೇ ನಿಯಮದ ಅನುಸಾರವಾಗಿ ಈ ಸಭೆ ಹಕ್ಕುಬಾಧ್ಯತಾ ಸಮಿತಿಗೆ ಒಂಬತ್ತು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇವೆ.

ಉ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 277(1)ನೇ ನಿಯಮದ ಅನುಸಾರವಾಗಿ ಈ ಸಭೆ ಅಧೀನ ಶಾಸನ ರಚನಾ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಊ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 281(1)ನೇ ನಿಯಮದ ಅನುಸಾರವಾಗಿ ಈ ಸಭೆ ಸರ್ಕಾರಿ ಭರವಸೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಋ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 283(1)ನೇ ನಿಯಮದ ಅನುಸಾರವಾಗಿ ಈ ಸಭೆ ಖಾಸಗಿ ಸದಸ್ಯರ ವಿಧೇಯಕಗಳ ಹಾಗೂ ನಿರ್ಣಯಗಳ ಸಮಿತಿಗೆ ಹತ್ತು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಋ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 286ನೇ

ನಿಯಮದ ಅನುಸಾರವಾಗಿ ಈ ಸಭೆ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಎ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 288ನೇ ನಿಯಮದ ಅನುಸಾರವಾಗಿ ಈ ಸಭೆ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಏ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 370(2)ನೇ ನಿಯಮದ ಅನುಸಾರವಾಗಿ ಈ ಸಭೆ ಸದನದ ಸಮಿತಿ (ವಸತಿ ಸೌಕರ್ಯಗಳ ಸಮಿತಿ)ಗೆ ಹನ್ನೆರಡು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಐ) 1976ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಶಾಸನದ 21 (1) (14)ನೇ ಕಲಮಿನ ಮೇರೆಗೆ ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಗುಲ್ಬರ್ಗಾ ವಿಶ್ವವಿದ್ಯಾನಿಲಯದ ಸೆನೆಟ್‌ಗೆ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು: ಪ್ರಸ್ತಾವಗಳನ್ನು ಮಂಡಿಸಲಾಯಿತು. ಈಗ ಗಮನ ಸೆಳೆಯುವ ಸೂಚನೆ.